ಆ) ಹಂಚಿನಾಳ ಗ್ರಾಮದ ಆಯುರ್ವೇದ ಆಸ್ಪತ್ರೆಯ ಎ.ಎಂ.ಪಿ. ವೈದ್ಯರು ನಿವೃತ್ತಿಯಾಗುತ್ತಿರುವುದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಮೇರೆಗೆ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹಂಚಿನಾಳ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಬಂದಿರುವುದಿಲ್ಲ.

ಆ) ಪ್ರಸ್ತಾವನೆ ಬಂದಲ್ಲಿ ಮಾರ್ಗಸೂಚಿ ಪ್ರಕಾರ ಪರಿಶೀಲಿಸಲಾಗುವುದು.

1315(1096) ಶ್ರೀ ನರಸಿಂಹಸ್ವಾಮಿ. ಜೆ (ದೊಡ್ಡಬಳ್ಳಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ನಗರದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ಕರ್ನಾಟಕ ಭೂ ಸೇನಾ ನಿಗಮಕ್ಕೆ ವಹಿಸಲಾಗಿದೆಯೇ;

ಆ) ವಹಿಸಿದಲ್ಲಿ, ಇದರ ಅಂದಾಜು ವೆಚ್ಚವೆಷ್ಟು; ಕಾಮಗಾರಿಯನ್ನು ಯಾವ ದಿನಾಂಕದಿಂದ ಪ್ರಾರಂಭಿಸಲಾಗಿದೆ; ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು;

ಇ) ಇದುವರೆವಿಗೆ ಎಷ್ಟು ಕಾಮಗಾರಿಯನ್ನು ಮಾಡಲಾಗಿದೆ ಹಾಗೂ ಭೂ-ಸೇನಾ ನಿಗಮಕ್ಕೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ದೊಡ್ಡಬಳ್ಳಾಪುರ ನಗರದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಿಂದ ಬಾಲಕಿಯರ ವಿದ್ಯಾರ್ಥಿ ನಿಲಯವನ್ನು ನಿರ್ಮಿಸುವಲ್ಲಿ ಕಟ್ಟಡ ನಿರ್ಮಾಣ ಕಾರ್ಯವನ್ನು ಕರ್ನಾಟಕ ಭೂ-ಸೇನಾ ನಿಗಮಕ್ಕೆ ವಹಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖಾ ವತಿಯಿಂದ ಸದರಿ ನಗರದಲ್ಲಿ ಯಾವುದೇ ವಿದ್ಯಾರ್ಥಿ ನಿಲಯ ಕಾರ್ಯ ನಿರ್ವಹಿಸುತ್ತಿಲ್ಲ.

ಆ) ಹಿಂದುಳಿದ ವರ್ಗಗಳ ಇಲಾಖೆಯಿಂದ ನಗರದಲ್ಲಿ ಕಟ್ಟಡ ನಿರ್ಮಾಣ ಕಾರ್ಯಕ್ಕಾಗಿ ರೂ. 44.85 ಲಕ್ಷ ವೆಚ್ಚ ಅಂದಾಜಿಸಲಾಗಿದೆ. ಕಾಮಗಾರಿಯನ್ನು ಆಗಸ್ಟ್ 2003ರಂದು ಪ್ರಾರಂಭಿಸಲಾಗಿದೆ. ಕಟ್ಟಡದ ಕಾರ್ಯವು ಅಂತಿಮ ಹಂತದಲ್ಲಿದ್ದು ಸೆಪ್ಟೆಂಬರ್ 2006ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

ಇ) ಹಿಂದುಳಿದ ವರ್ಗಗಳ ಇಲಾಖೆಯಿಂದ ಮೇಲೆ ತಿಳಿಸಿರುವ ಕಾಮಗಾರಿಯ ನಿರ್ಮಾಣ ಕಾರ್ಯವು ಅಂತಿಮ ಹಂತದಲ್ಲಿದೆ. ಇದಕ್ಕಾಗಿ ರೂ. 44.85 ಲಕ್ಷ ಭೂ–ಸೇನಾ ನಿಗಮಕ್ಕೆ ಬಿಡುಗಡೆ ಮಾಡಲಾಗಿದೆ.

1316(694) ಶ್ರೀ ಪಾಟೀಲ್ ಡಿ.ಆರ್. (ಗದಗ್) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಒಟ್ಟು ಪಶು ಸಂಪತ್ತು ಎಷ್ಟು (ಪ್ರಾಣಿವಾರು, ಜಿಲ್ಲಾವಾರು ವಿವರ ನೀಡುವುದು)?

ಆ) ಈ ಪಶು ಸಂಪತ್ತಿನ ಆರೋಗ್ಯ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? ಅವು ಯಾವ ಪ್ರಮಾಣದಲ್ಲಿವೆ (ಜಿಲ್ಲಾವಾರು ವಿವರ ನೀಡುವುದು)

ಇ) ಈ ಪಶುಸಂಪತ್ತಿನ ಅಂಕಿ ಸಂಖ್ಯೆಯ ಆಧಾರದ ಮೇಲೆ ಪ್ರಸ್ತುತ ಸೌಲಭ್ಯಗಳನ್ನು ಗಮನಿಸಿದಾಗ ಜಿಲ್ಲಾವಾರು ತಾರತಮ್ಯವಾಗಿದೆಯೇ?

ಈ) ತಾರತಮ್ಯವಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಉ) ಈ ಸೌಲಭ್ಯಗಳ ಮುಖಾಂತರ ಪ್ರತಿ ವರ್ಷ ಔಷಧಿಗಾಗಿ ಮಾಡಿದ ವೆಚ್ಚ ಎಷ್ಟು? (ಕಳೆದ ಮೂರು ವರ್ಷಗಳ ವರ್ಷವಾರು ವಿವರ ನೀಡುವುದು) ಔಷಧ ವೆಚ್ಚ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಊ) ಈ ಎಲ್ಲಾ ಸೌಲಭ್ಯಗಳಲ್ಲಿ ಮಂಜೂರಾದ ಸಿಬ್ಬಂದಿ ಎಷ್ಟು ಅದರಲ್ಲಿ ಇರುವ ಸಿಬ್ಬಂದಿ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)?

ಋ) ಈ ಸಿಬ್ಬಂದಿಯ ಕೊರತೆಯಿಂದಾಗಿ ಪಶುಸಂಗೋಪನೆಯಲ್ಲಿ ತೊಡಗಿಸಿಕೊಂಡಿರುವವರು ಎದುರಿಸುವ ಸಮಸ್ಯೆಗಳನ್ನು ತೊಂದರೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) ಅಕ್ಟೋಬರ್ 2003ನೇ ಸಾಲಿನಲ್ಲಿ ನಡೆಸಿದ ರಾಜ್ಯ 17ನೇ ಜಾನುವಾರು ಗಣತಿ ಪ್ರಕಾರ ರಾಜ್ಯದಲ್ಲಿ 2,83,58,534 ಜಾನುವಾರುಗಳಿವೆ. ಪ್ರಾಣಿವಾರು, ಜಿಲ್ಲಾವಾರು ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಈ ಪಶು ಸಂಪತ್ತಿನ ಆರೋಗ್ಯ ರಕ್ಷಣೆಗಾಗಿ ರಾಜ್ಯದಲ್ಲಿರುವ ಒಟ್ಟಾರೆ 3876 ವಿವಿಧ ಪಶುವೈದ್ಯ ಸಂಸ್ಥೆಗಳ ಮುಖಾಂತರ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಜಿಲ್ಲಾವಾರು ಪಶುವೈದ್ಯ ಸಂಸ್ಥೆಗಳ ವಿವರವನ್ನು ಅನುಬಂಧ–2ರಲ್ಲಿ ನೀಡಲಾಗಿದೆ.